**ಮೂರನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ನ್ಯಾಯಾಲಯ,**
**ದಕ್ಷಿಣ ಕನ್ನಡ, ಮಂಗಳೂರು.**

**ಸೆಷನ್ಸ್ ಕೇಸ್ ನಂಬ್ರ 126/2024**

| | | | |
|---|---|---|---|
| ಸಾಕ್ಷಿದಾರರ ಹೆಸರು | : | ಶ್ರೀ ಗಂಗಾದರ ಪೂಜಾರಿ | ಪ್ರಾಸಾಃ 12 |
| ತಂದೆಯ ಹೆಸರು | : | ವಾಸು ಪೂಜಾರಿ | ಚಾಸಾಃ 15 |
| ಪ್ರಾಯ | : | 42 ವರ್ಷ | **ದಿನಾಂಕಃ 07.01.2026** ರಂದು ಸಾಕ್ಷಿದಾರರಿಗೆ ಪ್ರಮಾಣವಚನ ಬೋಧಿಸಲಾಯಿತು. |
| ಉದ್ಯೋಗ | : | ಮುಖ್ಯ ಪೇದೆ, ಬಂಟ್ವಾಳ ಗ್ರಾಮಾಂತರ ಠಾಣೆ | |
| ವಾಸಸ್ಥಳ | : | ಮಣಿನಾಲ್ಕೂರು, ಬಂಟ್ವಾಳ | |

**ಮುಖ್ಯ ವಿಚಾರಣೆಃ ಮಾನ್ಯ ಸರಕಾರಿ ಅಭಿಯೋಜಕರಿಂದಃ**

ನಾನು 2019 ರಿಂದ ಡಿಸೆಂಬರ್ 2024 ರವರೆಗೆ ಬೆಳ್ತಂಗಡಿ ಠಾಣೆಯಲ್ಲಿ ಮುಖ್ಯ ಪೇದೆ ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

2. ಈ ಪ್ರಕರಣಕ್ಕೆ ಸಂಬಂಧಿಸಿದಂತೆ ದಿನಾಂಕ 29.06.2024 ರಂದು ಠಾಣಾಧಿಕಾರಿಯವರ ಮೌಖಿಕ ಆದೇಶದಲ್ಲಿ ಮಂಗಳೂರು ವೆನ್ಲಾಕ್ ಆಸ್ಪತ್ರೆಯಲ್ಲಿ ಗಾಯಗೊಂಡು ಚಿಕಿತ್ಸೆಗೆ ದಾಖಲಾಗಿದ್ದ ಚಾಸಾ-1 ರವರನ್ನು ಮದ್ಯಾಹ್ನ 12.15 ಗಂಟೆಯಿಂದ 1.15 ಗಂಟೆಯವರೆಗೆ ವಿಚಾರಿಸಿ ಅವರ ಹೇಳಿಕೆಯನ್ನು ದಾಖಲಿಸಿಕೊಂಡು ನಂತರ ಅವರಿಗೆ ಓದಿ ಹೇಳಿ, ಸದರಿ ಹೇಳಿಕೆಯಲ್ಲಿ ಅವರ ಸಹಿ ಪಡೆದು , ನಂತರ ಠಾಣೆಗೆ ಬಂದು ಠಾಣಾ ಪ್ರಭಾರದಲ್ಲಿದ್ದ ಚಾಸಾ-16 ರವರಿಗೆ ಸಂಜೆ 3.15 ಗಂಟೆಗೆ ಹೇಳಿಕೆಯನ್ನು ಹಸ್ತಾಂತರಿಸಿರುತ್ತೇನೆ. ಸಾಕ್ಷಿ ಗುರುತಿಸಿದ ಸದರಿ ಹೇಳಿಕೆಯನ್ನು ಈಗಾಗಲೇ ನಿಪಿ-1 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿಪಿ-1(ಬಿ) ಎಂದು ಗುರುತಿಸಲಾಯಿತು.

**ಪಾಟೀ ಸವಾಲುಃ ಆರೋಪಿ ಪರವಾಗಿ ಶ್ರೀ ವಿ.ಆರ್.ಎ. ವಕೀಲರಿಂದಃ**

3. ನಾನು ಮಂಗಳೂರು ವೆನ್ಲಾಕ್ ಆಸ್ಪತ್ರೆಗೆ ಹೋಗಿರುವುದಿಲ್ಲ ಮತ್ತು ಅಲ್ಲಿ ದಾಖಲಾಗಿದ್ದ ಚಾಸಾ-1 ರವರ ಹೇಳಿಕೆಯನ್ನು ಪಡೆದಿರುವುದಿಲ್ಲ ಎಂದರೆ ಸರಿಯಲ್ಲ. ಈ ಕೇಸಿಗೆ ಪೂರಕವಾಗುವಂತೆಹೇಳಿಕೆಯನ್ನು ತಯಾರು ಮಾಡಿರುತ್ತೇನೆಂದರೆ ಸರಿಯಲ್ಲ. ನಾನು ಠಾಣಾಧಿಕಾರಿಯವರಿಗೆ ಯಾವುದೇ ಹೇಳಿಕೆಯನ್ನು ನೀಡಿರುವುದಿಲ್ಲ ಎಂದರೆ ಸರಿಯಲ್ಲ. ನಾನು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆಂದರೆ ಸರಿಯಲ್ಲ .

**ಮರುವಿಚಾರಣೆಃ ಇಲ್ಲ.**

(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.)

ಓದಿ ಹೇಳಿ ಕೇಳಿ ಸರಿ ಇದೆ.

ಮೂರನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ದ.ಕ., ಮಂಗಳೂರು.